ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಎಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027.India
Tel : 080-22221321 / 25
Website : www.ksrtc.in

ಸಂಖ್ಯೆ: ಕರಾಸಾ/ಕೇಕ/ಆಡಳತ/ಎ1-285/ 181 /2021-22

ದಿನಾಂಕ: 06.07.2021

## ಆ ದೇ ಶ

**ವಿಷಯ:** ಕ.ರಾ.ರ.ಸಾ. ನಿಗಮದಲ್ಲಿ ಚಾಲ್ತಿಯಲ್ಲಿರುವ ಗೃಹಸಾಲದ ಮೇಲಿನ 4% ಬಡ್ಡಿ ಸಹಾಯಧನವನ್ನು ನೀಡುವ ಯೋಜನೆಯನ್ನು ಕೋವಿಡ್-19 ನಿಮಿತ್ತ 2020-21ನೇ ಸಾಲಿಗೆ ಸ್ಥಗಿತಗೊಳಿಸುವ ಕುರಿತು.

**ಉಲ್ಲೇಖ:** 1.ಸಂಖ್ಯೆ.ಕರಾಸಾ/ಕೇಕ/ಆಡಳಿತ/ಎ1/ಗೃಸಾ/365/08-09 ದಿ:22.08.2008
2.ಸೂಕ್ತಾಧಿಕಾರಿಗಳ ಅದೇಶ ದಿನಾಂಕ: 28.06.2021

+++++

ಜಾಗತಿಕ ಮಟ್ಟದಲ್ಲಿ ವ್ಯಾಪಕವಾಗಿ ಕೋವಿಡ್-19 ಎರಡನೇ ಅಲೆಯು ಹರಡುತ್ತಿರುವ ಹಿನ್ನೆಲೆಯಲ್ಲಿ, ರಾಜ್ಯದಾದ್ಯಂತ ಲಾಕ್‌ಡೌನ್ ಘೋಷಣೆಯಾಗಿದ್ದರಿಂದ, ಕ.ರಾ.ರ.ಸಾ.ನಿಗಮದಲ್ಲಿ ದಿನಾಂಕ:27.04.2021 ರಿಂದ ದಿನಾಂಕ:21.06.2021 ರವರೆಗೆ ಸಂಪೂರ್ಣ ಸಾರಿಗೆ ಸಂಚಾರ ಸ್ಥಗಿತಗೊಂಡಿದ್ದರಿಂದ ನಿಗಮವು ತೀವ್ರ ಆರ್ಥಿಕ ಸಂಕಷ್ಟದ ಪರಿಸ್ಥಿತಿಯಲ್ಲಿದ್ದು, ಈ ನಿಟ್ಟಿನಲ್ಲಿ ನಿಗಮದ ಆರ್ಥಿಕ ಪುನಶ್ಚೇತನದ ದೃಷ್ಟಿಯಿಂದ ಕೆಲವು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಅನಿವಾರ್ಯವಾಗಿರುತ್ತದೆ.

ಆದ್ದರಿಂದ, ನಿಗಮದಲ್ಲಿ ಅಧಿಕಾರಿ/ನೌಕರರಿಗೆ ಪ್ರತಿ ವರ್ಷ ನೀಡುತ್ತಿರುವ ಗೃಹಸಾಲದ ಮೇಲಿನ 4% ಬಡ್ಡಿ ಸಹಾಯಧನ ಯೋಜನೆಯನ್ನು ನಿಗಮದ ಆರ್ಥಿಕ ಹಿತದೃಷ್ಟಿಯ ಕಾರಣದಿಂದಾಗಿ 2020-21ನೇ ಸಾಲಿಗೆ ಅನ್ವಯವಾಗುವಂತೆ ಸ್ಥಗಿತಗೊಳಿಸಲಾಗಿದೆ.

ಸಂಬಂಧಪಟ್ಟವರೆಲ್ಲರೂ ಮೇಲಿನ ನಿರ್ದೇಶನಗಳನ್ನು ತಪ್ಪದೇ ಪಾಲಿಸಲು ಸೂಚಿಸಲಾಗಿದೆ.

| ಸೂಕ್ತಾಧಿಕಾರಿಗಳಾದ ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿತ. |
|---|

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿಬ್ಬಂದಿ)

**ಪ್ರತಿಯನ್ನು ವಂದನಾಪೂರ್ವಕವಾಗಿ:**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕ.ರಾ.ರ.ಸಾ.ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ ರವರಿಗೆ.
3. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರ ಹಿರಿಯ ಆಪ್ತ ಕಾರ್ಯದರ್ಶಿ ರವರ ಮಾಹಿತಿಗಾಗಿ.
4. ಮಾನ್ಯ ನಿರ್ದೇಶಕರು(ಸಿ:ಪ)/(ಭ:ಜಾ), ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

5. ಎಲ್ಲಾ ಇಲಾಖಾ ಮುಖ್ಯಸ್ಥರು/ವಿಭಾಗೀಯ ನಿಯಂತ್ರಣಾಧಿಕಾರಿಗಳು/ಕಾರ್ಯ ವ್ಯವಸ್ಥಾಪಕರು/ ಪ್ರಾಂಶುಪಾಲರು, ಕಾರ್ಯನಿರ್ವಾಹಕ ಅಭಿಯಂತರರು, ಕ.ರಾ.ರ.ಸಾ.ನಿಗಮ ರವರುಗಳಿಗೆ.
6. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಕಚೇರಿ ಆದೇಶವನ್ನು ಕೇಂದ್ರ ಕಚೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ತಪ್ಪದೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಕಚೇರಿ ಆದೇಶವನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು. ಪ್ರಕಟಿಸಿದ ಬಗ್ಗೆ ಮಾಹಿತಿ ನೀಡುವುದು.
9. ಪ್ರಧಾನ ಕಛೇರಿ ಪತ್ರ ಕಡತ.

Scanned with CamScanner